ಭೂ ನ್ಯಾಯ ಮಂಡಳಿ, ಆಶ್ರಯ ಅಕ್ರಮ ಸಕ್ರಮ ಸಮಿತಿಗಳ ಬಗ್ಗೆ

687 - ಶ್ರೀ ಬಿ. ರಮಾನಾಥ ರೈ (ಬಂಟ್ವಾಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಭೂ ನ್ಯಾಯ ಮಂಡಳಿ ಆಶ್ರಯ, ಅಕ್ರಮ ಸಕ್ರಮ ಸಮಿತಿಗಳು ಇಲ್ಲದೆ ಜನರಿಗೆ ಆಗುವ ತೊಂದರೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಇದರ ಪುನರ್ ರಚಿಸುವ ಬಗ್ಗೆ ಸರ್ಕಾರವು ಕ್ರಮ ಕೈಗೊಂಡಿದೆಯೇ?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) ಹೌದು.

ಆ) ಭೂ ನ್ಯಾಯ ಮಂಡಳಿ ಮತ್ತು ಬಗರ್ ಹುಕುಂ ಸಕ್ರಮೀಕರಣ ಸಮಿತಿಗಳನ್ನು ಸಧ್ಯದಲ್ಲೇ ಪುನರ್ ರಚಿಸಲಾಗುವುದು.

ಸಹಕಾರಿ ಬ್ಯಾಂಕುಗಳ ಸಾಲ ಮನ್ನಾ ಕುರಿತು

636 - ಶ್ರೀ ರಮಾನಾಥ ರೈ (ಬಂಟ್ವಾಳ) : ಮಾನ್ಯ ಸಹಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಬ್ಯಾಂಕುಗಳಲ್ಲಿ ಪಡೆದ ಸಾಲವನ್ನು ಸಾಲ ಮನ್ನಾ ಯೋಜನೆಯಡಿ ಮನ್ನಾ ಮಾಡಿದ ಬ್ಯಾಂಕುಗಳಿಗೆ ಸರಕಾರ ಹಣವನ್ನು ಭರಿಸುವ ಉಲೋಜನೆ ಇದೆಯೇ?

ಆ) ಇದ್ದಲ್ಲಿ ಈ ಹಣವನ್ನು ಯಾವಾಗ ಭರಿಸಲಾಗುವುದು?

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಸಚಿವರು) :

ಅ) ಸಾಲ ಮನ್ನಾ ಮಾಡುವ ಯಾವುದೇ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಅನಧಿಕೃತ ಮ್ಯಾಕ್ಸಿ ಕ್ಯಾಬ್‌ಗಳ ತಡೆಗೆ ಕ್ರಮ

444 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಷ್ಟ್ರೀಕೃತ ಮಾರ್ಗಗಳಲ್ಲಿ ಅನಧಿಕೃತವಾಗಿ ಮ್ಯಾಕ್ಸಿ ಕ್ಯಾಬ್‌ಗಳು ಓಡಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಇದನ್ನು ತಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ? ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಮಂತ್ರಿಗಳು) :

ಅ) ಬಂದಿದೆ.

ರಾಷ್ಟ್ರೀಕೃತ ಮಾರ್ಗಗಳಲ್ಲಿ ಅನಧಿಕೃತವಾಗಿ ಕಳ್ಳಾಟಿಕೆಯಿಂದ ಓಡಾಡಿಸುತ್ತಿರುವ ಮ್ಯಾಕ್ಸಿ ಕ್ಯಾಬ್‌ಗಳ ಸಂಚಾರವನ್ನು ತಡೆಗಟ್ಟಲು ರಾಜ್ಯ ಸರ್ಕಾರವು ಈಗಾಗಲೇ ಕ್ರಮವನ್ನು ತೆಗೆದುಕೊಂಡು ಎಲ್ಲಾ ಜಿಲ್ಲೆಗಳಲ್ಲಿ ಜಾಗೃತ ದಳಗಳನ್ನು ರಚಿಸಿದೆ. ಈ ಜಾಗೃತ ದಳಗಳು ಮ್ಯಾಕ್ಸಿಕ್ಯಾಬ್‌ಗಳು ಅನಧಿಕೃತವಾಗಿ ಓಡಾಡುವುದನ್ನು ತಡೆಗಟ್ಟಲು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿವೆ.

ಆ) ಹೌದು.

ಸಾರಿಗೆ ಇಲಾಖೆಯ ತಪಾಸಣಾ ತಂಡದ ಅಧಿಕಾರಿಗಳು ಈ ನಿಟ್ಟಿನಲ್ಲಿ ಅಗತ್ಯ ಕ್ರಮ ತೆಗೆದುಕೊಂಡು 1-4-95ರಿಂದ 30-6-95ರವರೆಗೆ ಅನಧಿಕೃತವಾಗಿ ಸಂಚರಿಸುತ್ತಿದ್ದ ಸುಮಾರು 4088 ಮ್ಯಾಕ್ಸಿಕ್ಯಾಬಗಳನ್ನು ತಪಾಸಣೆಗಳನ್ನು ನಡೆಸಿ 2633 ಮ್ಯಾಕ್ಸಿಕ್ಯಾಬ್ ವಾಹನಗಳ ಪರವಾನಗಿಗಳನ್ನು ಅಮಾನತ್ತುಗೊಳಿಸಿ, 1380 ಪ್ರಕರಣಗಳನ್ನು ದಾಖಲಿಸಿಕೊಂಡು ರೂ. 2,82,480-00 ತೆರಿಗೆ ಹಾಗೂ ರೂ. 26,66,823-00 ದಂಡ ವಸೂಲು ಮಾಡಿರುತ್ತಾರೆ.

ಅಕ್ರಮ ಸಾಗುವಳಿಯನ್ನು ಸಕ್ರಮಗೊಳಿಸುವುದು

1278 - ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಕ್ರಮ ಸಾಗುವಳಿಯನ್ನು ಸಕ್ರಮ ಮಾಡಲು ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಇದರಲ್ಲಿ ಎಷ್ಟು ಜನರ ಅಕ್ರಮ ಸಾಗುವಳಿಯನ್ನು ಸಕ್ರಮಗೊಳಿಸಿ ಸಾಗುವಳಿ ಚೀಟಿ ನೀಡಲಾಗಿದೆ; ಇನ್ನು ಎಷ್ಟು ಅರ್ಜಿಗಳು ವಿಲೇವಾರಿಯಾಗದೆ ಉಳಿದಿವೆ?

ಇ) ಅಕ್ರಮ ಸಾಗುವಳಿ ಸಕ್ರಮಗೊಳಿಸುವ ಸಮಿತಿ ಈಗ ಅಸ್ತಿತ್ವದಲ್ಲಿದೆಯೇ; ಇಲ್ಲದಿದ್ದಲ್ಲಿ ಅದಕ್ಕೆ ಕಾರಣವೇನು?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) 10,86,826 ಅರ್ಜಿಗಳು

ಆ) ಒಟ್ಟು ಸಕ್ರಮಗೊಳಿಸಿದ ಅರ್ಜಿಗಳ ಸಂಖ್ಯೆ 2,28,880
ಒಟ್ಟು ಹಕ್ಕುಪತ್ರ ನೀಡಲಾದ ಅರ್ಜಿಗಳ ಸಂಖ್ಯೆ 67,045
ಒಟ್ಟು ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ 4,61,401

ಇ) ಇಲ್ಲ. ಅನಧಿಕೃತ ಸಾಗುವಳಿಯನ್ನು ಸಕ್ರಮಗೊಳಿಸುವ ಸಮಿತಿಗಳ ಮುಂದೆ ಬಾಕಿ